# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ॥ ಧನಂಜಯ ಸರ್ಜಿ ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ಪ್ರಶ್ನೆ:**

ರಾಜ್ಯದ ವಿವಿಧ ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಯೋಜನಾ ಪ್ರಾಧಿಕಾರಗಳ KTCP ಕಾಯ್ದೆಯ ನಿಯಮಾವಳಿಗೆ ವಿರುದ್ಧವಾಗಿ, ಅವೈಜ್ಞಾನಿಕವಾಗಿ ವಿನ್ಯಾಸ ಅನುಮೋದನೆ ನೀಡುತ್ತಿರುವ ಪಾರದರ್ಶಕತೆ ಇಲ್ಲದಿರುವುದು ಅನುಮೋದನೆಯಲ್ಲಿ ಅನಗತ್ಯ ವಿಳಂಬ ಧೋರಣೆ ಅನುಸರಿಸುವುದು, ಅರ್ಜಿದಾರರು ನೇರವಾಗಿ ಅರ್ಜಿಸಲ್ಲಿಸಿದಲ್ಲಿ ಸ್ಪಂಧಿಸದೇ ಇರುವುದು, ಮಧ್ಯವರ್ತಿಗಳ ಹಾವಳಿ, ಸೇರಿದಂತೆ ಭ್ರಷ್ಟಾಚಾರ ನಿಯಂತ್ರಿಸಿ, ಕಾಲಮಿತಿಯಲ್ಲಿ ವೈಜ್ಞಾನಿಕವಾಗಿ ನಕ್ಷೆ ಅನುಮೋದನೆಗೆ ಕ್ರಮ ಕೈಗೊಳ್ಳುವ ಕುರಿತು.

**ಉತ್ತರ:**

ಪ್ರಸ್ತುತ ಮಾಹಿತಿ ತಂತ್ರಜ್ಞಾನವು ಎಲ್ಲಾ ಕ್ಷೇತ್ರಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದು, ಸಾರ್ವಜನಿಕ ಸೇವೆಗಳ ಸುಧಾರಣೆ ಮತ್ತು ಸುಲಭ ಲಭ್ಯತೆಗೆ ಇದು ಮಹತ್ವಪೂರ್ಣ ಸಾಧನವಾಗಿದೆ. ನಾಗರೀಕರು ಸರಳವಾಗಿ, ದಕ್ಷವಾಗಿ ಹಾಗೂ ಪರಿಣಾಮಕಾರಿಯಾಗಿ ಸೇವೆಗಳ ಲಾಭ ಪಡೆಯಲು ಮಾಹಿತಿ ತಂತ್ರಜ್ಞಾನವು ಸಹಾಯಕವಾಗಿದೆ.

ಈ ಹಿನ್ನಲೆಯಲ್ಲಿ ರಾಜ್ಯದಲ್ಲಿನ ಭೂ ಅಭಿವೃದ್ಧಿಗೆ ಸಂಬಂಧಿಸಿದ ಸೇವೆಗಳನ್ನು ಸುಧಾರಣೆಗೊಳಿಸಿ. ನಾಗರಿಕರಿಗೆ ಸುಲಭ, ಸುಗಮ ಹಾಗೂ ಪಾರದರ್ಶಕ ಸೇವೆಗಳನ್ನು ಒದಗಿಸಲು, ಇಲಾಖೆ/ಪ್ರಾಧಿಕಾರಗಳು ನಾಗರೀಕರಿಗೆ ವಿವಿಧ ಒದಗಿಸುವ ಸೇವೆಗಳನ್ನು ಏಕೀಕರಣಗೊಳಿಸಿ ತ್ವರಿತವಾಗಿ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆ (Unified Land Management System-ULMS) ಎಂಬ ಡಿಜಿಟಲ್ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಸದರಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸುವುದರಿಂದ ಸಮಗ್ರವಾಗಿ ಭೂ ಅಭಿವೃದ್ಧಿಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಭೂ ಸಮೀಕ್ಷೆ, ಸರ್ವೆ, ಭೂ ಪರಿವರ್ತನೆ, ವಿನ್ಯಾಸ ನಕ್ಷೆ ಅನುಮೋದನೆ, ಕಟ್ಟಡ ನಕ್ಷೆ ಅನುಮೋದನೆ, ಭೂ ಉಪಯೋಗ ಬದಲಾವಣೆ ಹಾಗೂ ಸ್ವತ್ತು ನೋಂದಣಿ(ಕಾವೇರಿ) ಮತ್ತು ಖಾತಾ (ಇ-ಆಸ್ತಿ) ದಾಖಲೆಗಳನ್ನು ಒಟ್ಟುಗೂಡಿಸಿ. ಕಾಗದರಹಿತ ಮತ್ತು ಸಂಪೂರ್ಣ ಡಿಜಿಟಲ್ ಸೇವೆಯನ್ನು ಸಾರ್ವಜನಿಕರಿಗೆ ನೀಡುವ ಉದ್ದೇಶ ಹೊಂದಲಾಗಿದೆ.

ನಗರಾಭಿವೃದ್ಧಿ ಇಲಾಖೆಯ ವತಿಯಿಂದ ಸಾರ್ವಜನಿಕರಿಗೆ ಒದಗಿಸುವ ಸೇವೆಗಳಾದ ವಿನ್ಯಾಸ ನಕ್ಷ ಅನುಮೋದನೆ, ಕಟ್ಟಡ ನಕ್ಷೆ ಅನುಮೋದನೆ ಮತ್ತು ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಗಳನ್ನು ಸಂಬಂಧಿತ ಸಂಸ್ಥೆಗಳಾದ ನಗರಾಭಿವೃದ್ಧಿ ಪ್ರಾಧಿಕಾರಗಳು , ನಗರ ಯೋಜನಾ ಪ್ರಾಧಿಕಾರಗಳು ಹಾಗೂ ಪುರಸಭಾ ಯೋಜನಾ ಪ್ರಾಧಿಕಾರಗಳಿಂದ ಭಾಗಶಃ ಆನ್‌ಲೈನ್ ಮೂಲಕ ನಿರ್ವಹಿಸುತ್ತಿದ್ದು, ಪ್ರಸ್ತುತ ಸದರಿ ಸೇವೆಗಳನ್ನು ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆ (Unified Land Management System-ULMS) ರಡಿಯಲ್ಲಿ ಪೂರ್ಣ ಪ್ರಮಾಣದಲ್ಲಿ ಆನ್‌ಲೈನ್ ಮೂಲಕ ಕಾರ್ಯನಿರ್ವಹಿಸುವ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ.

ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆ (Unified Land Management System-ULMS) ಜಾರಿಗೊಳಿಸುವುದರಿಂದ ಮಧ್ಯವರ್ತಿಗಳ ಹಾವಳಿ ತಪ್ಪಿಸಲು, ಭ್ರಷ್ಟಾಚಾರ ನಿಯಂತ್ರಿಸಲು ಹಾಗೂ ಕಾಲಮಿತಿಯಲ್ಲಿ ವೈಜ್ಞಾನಿಕವಾಗಿ ವಿನ್ಯಾಸ ಅನುಮೋದಿಸಲು ಸಹಕಾರಿಯಾಗುತ್ತದೆ.

**ಸಂಖ್ಯೆ :ನಅಇ 519 ಮೈಅಪ್ರಾ 2025(ಇ)**

**(ಬಿ.ಎಸ್ ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು